## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ ೬೭ ಇಎಸ್‌ಟಿ(೭) ೨೦೧೭/2A72

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-೫೬೦ ೦೦೧,
ದಿನಾಂಕ: ೧೧/೧೨/೨೦೧೮

**ಸುತ್ತೋಲೆ**

ವಿಷಯ: ವಿಧಾನಸಭೆ ಮತ್ತು ವಿಧಾನಪರಿಷತ್ತಿನ ಸದಸ್ಯರ ಚುಕ್ಕೆ ಗುರುತಿನ ಮತ್ತು ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಉತ್ತರ ನೀಡುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ೨೦೧೮ನೇ ಸಾಲಿನ ಚಳಿಗಾಲದ ಅಧಿವೇಶನವು ದಿನಾಂಕ:೧೦/೧೨/೨೦೧೮ ರಿಂದ ಬೆಳಗಾವಿಯಲ್ಲಿ ನಡೆಯುತ್ತಿದ್ದು, ಅಧಿವೇಶನದಲ್ಲಿ ವಿಧಾನಸಭೆ ಮತ್ತು ವಿಧಾನಪರಿಷತ್ತಿನ ಸದಸ್ಯರುಗಳ ಚುಕ್ಕೆ ಗುರುತಿನ ಮತ್ತು ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಕೂಡಲೇ ಉತ್ತರಗಳನ್ನು ಸಲ್ಲಿಸಬೇಕಾಗಿರುತ್ತದೆ. ಆದರೆ ನಿರ್ದೇಶನಾಲಯದಿಂದ ಕೋರಲಾಗುವ ಮಾಹಿತಿ/ಅಂಕಿಅಂಶಗಳನ್ನು ಕೆಲವೊಂದು ಸಂಸ್ಥೆಗಳು ತುರ್ತಾಗಿ ನೀಡದೇ ಇರುವುದು ಕಂಡು ಬಂದಿರುತ್ತದೆ. ಆದ ಕಾರಣ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ/ಪಾಲಿಟೆಕ್ನಿಕ್‌ಗಳ/ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರು ಮತ್ತು ಎಲ್ಲಾ ಅಧಿಕಾರಿ/ಸಿಬ್ಬಂದಿಯವರು ಅಧಿವೇಶನ ಮುಗಿಯುವವರೆಗೂ ಯಾವುದೇ ರೀತಿಯ ರಜೆಯ ಮೇಲೆ ತೆರಳದೇ ಸಂಸ್ಥೆಗಳಲ್ಲಿ ಹಾಜರಿದ್ದು, ಕಛೇರಿಯ ವೇಳೆಯ ನಂತರವೂ ಬರುವ ಪ್ರಶ್ನೆಗಳಿಗೆ /ಗಮನ ಸೆಳೆಯುವ ಸೂಚನೆಗಳಿಗೆ ಉತ್ತರಗಳನ್ನು ತಯಾರಿಸಲು, ಬೆರಳಚ್ಚು ಮಾಡಲು ಹಾಗೂ ಸರ್ಕಾರಕ್ಕೆ ತಲುಪಿಸಲು ಕಛೇರಿ ವೇಳೆಯ ನಂತರವೂ ಸಂಸ್ಥೆಯಲ್ಲಿ ಹಾಜರಿದ್ದು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಿಂದ ಕೋರಲಾಗುವ ಎಲ್ಲಾ ಮಾಹಿತಿ/ಅಂಕಿ ಅಂಶಗಳನ್ನು ವಿಳಂಬವಿಲ್ಲದೇ ತುರ್ತಾಗಿ ಸಲ್ಲಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರು ಮತ್ತು ಅಧಿಕಾರಿ/ಸಿಬ್ಬಂದಿಯವರನ್ನು ನೇರೆ ಹೊಣೆಗಾರರನ್ನಾಗಿ ಮಾಡಿ ಅವರ ವಿರುದ್ಧ ಸೂಕ್ತ ಶಿಸ್ತುಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

11/12/18

ನಿರ್ದೇಶಕರು

ಇವರಿಗೆ,

ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ/ಪಾಲಿಟೆಕ್ನಿಕ್‌ಗಳ/ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ – ಇಲಾಖಾ ವೆಬ್‌ಸೈಟ್ ಮೂಲಕ

ಪ್ರತಿ:ಮಾಹಿತಿಗಾಗಿ

೧. ಇ-ಆಡಳಿತ ಘಟಕಕ್ಕೆ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
೨. ನಿರ್ದೇಶಕರ ಆಪ್ತಶಾಖೆಗೆ

Sh E-7 Circular